# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2022-23ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಹೆಚ್ಚುವರಿಯಾಗಿ ಒದಗಿಸಿರುವ ರೂ.50.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 118 ಎಂಡಿಎಸ್ 2022, ದಿನಾಂಕ:08.04.2022.
2. ಸರ್ಕಾರದ ಆದೇಶ ಸಂಖ್ಯೆ: MWD 36 MDC 2022, ಬೆಂಗಳೂರು, ದಿನಾಂಕ: 26.04.2022.
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 65 ಎಂಡಿಸಿ 2022, ದಿ:26.08.2022.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂ:ಕಅಅನಿ/ಲೆಕ್ಕಶಾಖೆ/2022-23/1929, ದಿ:10.11.2022.
5. ಆರ್ಥಿಕ ಇಲಾಖೆಯ ಪತ್ರ ಸಂ:ಆಇ 03 ಬಿಎಸ್‌ಜಿ 2022, ದಿ:19.10.2022.

*****

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿನ ಸರ್ಕಾರದ ಆದೇಶ ದಿನಾಂಕ:08.04.2022 ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಕಾರ್ಯಕ್ರಮಗಳನ್ನು 2022-23ನೇ ಸಾಲಿಗೆ ಮುಂದುವರೆಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿನ ಸರ್ಕಾರದ ಆದೇಶ ದಿ:26.04.2022ರಲ್ಲಿ 2022-23ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಕಾರ್ಯಕ್ರಮಗಳನ್ನು ಅನುದಾನ ನಿಗದಿಪಡಿಸಿ ಅನುಷ್ಠಾನಗೊಳಿಸಲು ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿನ ಸರ್ಕಾರದ ಆದೇಶ ದಿ:26.08.2022ರಲ್ಲಿ 2022-23ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಹೆಚ್ಚುವರಿಯಾಗಿ ರೂ.50.00 ಕೋಟಿಗಳ ಅನುದಾನವನ್ನು ಒದಗಿಸಲಾಗಿರುವುದರಿಂದ ನಿಗಮದ ವಿವಿಧ ಕಾರ್ಯಕ್ರಮಗಳನ್ನು ಅನುದಾನ ನಿಗದಿಪಡಿಸಿ ಅನುಷ್ಠಾನಗೊಳಿಸಲು ಪರಿಷ್ಕೃತ ಕ್ರಿಯಾಯೋಜನೆಗೆ ಸರ್ಕಾರದ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿನ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು 2022-23ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಹೆಚ್ಚುವರಿಯಾಗಿ ರೂ.50.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಲಾಗಿದ್ದು, ಅದರಂತೆ ಪರಿಷ್ಕೃತ ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡಲಾಗಿರುವುದರಿಂದ ನಿಗಮಕ್ಕೆ ಹೆಚ್ಚುವರಿಯಾಗಿ ಒದಗಿಸಿರುವ ರೂ.50.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

........2

CamScanner

CamScanner

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿನ ಪತ್ರದಲ್ಲಿ 2022-23ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೇ ಕಂತು) ರಲ್ಲಿ ಒದಗಿಸಿರುವ ಅನುದಾನವನ್ನು ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯು ನೀಡಿರುವ ಅನುಮತಿಯ ಮೇರೆಗೆ ಪೂರಕ ಅಂದಾಜಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಒದಗಿಸಲಾಗಿರುವ ರೂ.50.00 ಕೋಟಿಗಳನ್ನು ಬಿಡುಗಡೆ ಮಾಡುವ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: MWD 65 MDC 2022, ಬೆಂಗಳೂರು, ದಿನಾಂಕ: 22-11-2022</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಪರಿಷ್ಕೃತ ಕ್ರಿಯಾ ಯೋಜನೆಯಲ್ಲಿನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು, 2022-23ನೇ ಸಾಲಿನಲ್ಲಿ ಪೂರಕ ಅಂದಾಜುಗಳ (ಮೊದಲನೇ ಕಂತು) ಲೆಕ್ಕಶೀರ್ಷಿಕೆ:2225-04-102-0-01(059)ರಡಿಯಲ್ಲಿ ಒದಗಿಸಲಾಗಿರುವ ರೂ.50.00 (ರೂ.ಐವತ್ತು ಕೋಟಿಗಳು) ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಿ ಆದೇಶಿಸಿದೆ.

ಸಂಬಂಧಪಟ್ಟ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಸಂಬಂಧಪಟ್ಟ ಆಯಾ ಅಧಿಕಾರಿಗಳು ಬಿಲ್ಲುಗಳನ್ನು ತಯಾರಿಸಿ ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ಇವರಿಂದ ಮೇಲೆ ವಿವರಿಸಿರುವ ಬಿಲ್ಲುಗಳಿಗೆ ಮೇಲುರುಜು ಪಡೆದು ಮತ್ತು ಟೋಕನ್‌ಗಳ ಮೇಲೆ ಸಹಿಯನ್ನು ಪಡೆದ ನಂತರ ರಾಜ್ಯ ಹುಜೂರು ಖಜಾನೆಗೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಸರ್ಕಾರದ ಆದೇಶ ಸಂ:ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ:04.04.2022 ಹಾಗೂ ಆರ್ಥಿಕ ಇಲಾಖೆ ಪತ್ರ ಸಂಖ್ಯೆ:ಆಇ 03 ಟಿಎಸ್‌ಜಿ 2022, ದಿನಾಂಕ:19-10-2022ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Mukhtar Pasha H.G. 22/11/2022
(ಮುಕ್ತಾರ್ ಪಾಷ ಹೆಚ್.ಜಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಲೆಕ್ಕಪರಿಶೋಧನೆ/ಆರ್ಥಿಕ ಮತ್ತು ಕಂದಾಯ ಘಟಕ ಪರಿಶೋಧನೆ/ಲೆಕ್ಕಪತ್ರ/ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಬೆಂಗಳೂರು.
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ ಆರ್ಥಿಕ ಇಲಾಖೆ (ವೆಚ್ಚ-3 &9), ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು, ಯೋಜನಾ ಇಲಾಖೆ, ಪಿಎಂಐ ವಿಭಾಗ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
7. ಸಮನ್ವಯಾಧಿಕಾರಿ, ಸಹಾಯವಾಣಿ ಕೇಂದ್ರ 24•7 (Helpline), ವಸಂತನಗರ, ಬೆಂಗಳೂರು.
   ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.
8. ಶಾಖಾ ರಕ್ಷಾ ಕಡತ.

CamScanner

CamScanner